ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಗೃಹ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 13/01/2020

# ಜಮೀರ್ ವಿರುದ್ಧ ಅವಹೇಳನಕಾರಿ ಪೋಸ್ಟ್: ದೂರು

ಬೆಂಗಳೂರು: ಶಾಸಕ ಜಮೀರ್ ಅಹ್ಮದ್ ಖಾನ್ ಕುರಿತಾಗಿ ಸಾಮಾಜಿಕ ಜಾಲತಾಣಗಳಲ್ಲಿ ಅವಹೇಳನಕಾರಿ ಪೋಸ್ಟ್ ಹಾಕಿ ಅವರ ವ್ಯಕ್ತಿತ್ವಕ್ಕೆ ಧಕ್ಕೆ ತಂದ ಆರೋಪಕ್ಕೆ ಸಂಬಂಧಿಸಿದಂತೆ ಋಷಿಕುಮಾರ ಸ್ವಾಮೀಜಿ ಹಾಗೂ ಶರತ್ ಎಂಬಾತನ ವಿರುದ್ಧ ಚಾಮರಾಜಪೇಟೆ ಪೊಲೀಸ್ ಠಾಣೆಯಲ್ಲಿ ಎಫ್ಐಆರ್ ದಾಖಲಾಗಿದೆ.

ಶರತ್ ಹಾಗೂ ಋಷಿಕುಮಾರ ಸ್ವಾಮೀಜಿ ಎಂಬುವವರು ಹಲೋ ಆ್ಯಪ್‌ನಲ್ಲಿ ಶಾಸಕ ಜಮೀರ್ ಅಹ್ಮದ್ ಖಾನ್ ಅವರ ವ್ಯಕ್ತಿತ್ವಕ್ಕೆ ಕುಂದು ಉಂಟು ಮಾಡುವ, ನಿರ್ದಿಷ್ಟ ಕೋಮಿನ ಭಾವನೆಗಳಿಗೆ ಧಕ್ಕೆ ತರುವ ಬರವಣಿಗೆಯನ್ನು ಪೋಸ್ಟ್ ಮಾಡಿದ್ದಾರೆ ಎಂದು ಆರೋಪಿಸಿ ಶಾಸಕರ ಕಚೇರಿ ಸಿಬ್ಬಂದಿ ಮೊಹಮದ್ ಅಯೂಬ್ ಪಾಷಾ ದೂರು ನೀಡಿದ್ದರು. ಈ ದೂರಿನ ಅನ್ವಯ ಆರೋಪಿಗಳ ವಿರುದ್ಧ ಎಫ್ಐಆರ್ ದಾಖಲಿಸಿಕೊಂಡು ತನಿಖೆ ನಡೆಸಲಾಗುತ್ತಿದೆ ಎಂದು ಪೊಲೀಸರು ಹೇಳಿದ್ದಾರೆ.